ಆ) ಹಾಗಿದ್ದಲ್ಲಿ ಇದರ ಪ್ರಯೋಜನವನ್ನು ಎಷ್ಟು ಮಂದಿ ಪಡೆದುಕೊಳ್ಳುತ್ತಿರುವರು?

ಇ) ಹಾಗಿಲ್ಲದಿದ್ದಲ್ಲಿ, ಈ ನಿವೃತ್ತ ನೌಕರರುಗಳಿಗೆ 5ನೇ ವೇತನ ಆಯೋಗದ ಶಿಫಾರಸ್ಸಿನಂತೆ ನಿವೃತ್ತಿ ವೇತನವನ್ನು ಜಾರಿಗೊಳಿಸಲು ಸರ್ಕಾರ ನಿಲುವೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :—

ಅ) ಹೌದು.

ಆ) 228 ಮಂದಿ.

ಇ) ಉದ್ಭವಿಸುವುದಿಲ್ಲ.

ಮೈಸೂರು ಮಹಾನಗರಪಾಲಿಕೆಯಲ್ಲಿ ಪೌರ ಕಾರ್ಮಿಕರ ಕೊರತೆ

2697 (3168) ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮೈಸೂರು ಮಹಾನಗರಪಾಲಿಕೆಯಲ್ಲಿ ಪೌರ ಕಾರ್ಮಿಕರ ಕೊರತೆಯಿಂದಾಗಿ ನಗರ ನೈರ್ಮಲ್ಯ ಕಾರ್ಯ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ನಗರ ನೈರ್ಮಲ್ಯ ಕಾರ್ಯವನ್ನು ನಗರದಲ್ಲೆಡೆ ದಿನವು ಕೈಗೊಳ್ಳುವಂತಾಗಲು ಯಾವ ರೀತಿಯ ಕ್ರಮ ಕೈಗೊಂಡಿದೆ.

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :—

ಅ) ಪೌರ ಕಾರ್ಮಿಕರ ಕೊರತೆ ಇದ್ದರೂ ನೈರ್ಮಲ್ಯ ಕಾರ್ಯ ಕುಂಠಿತ-ಗೊಂಡಿರುವುದಿಲ್ಲ.

ಆ) ನಗರ ನೈರ್ಮಲ್ಯ ಕಾರ್ಯವನ್ನು ಕೈಗೊಳ್ಳಲು 18 ವಾರ್ಡ್‌ಗಳನ್ನು 4 ಮಾರುಕಟ್ಟೆಗಳನ್ನು ಹಾಗೂ ನಗರದ ಮುಖ್ಯ ರಸ್ತೆಗಳ ಸ್ವಚ್ಛತೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆ.

ಗಣಿಗಾರಿಕೆಗಾಗಿ ವಹಿಸಿಕೊಟ್ಟ ಜಮೀನು

2699 (3020) ಶ್ರೀ ಶಿವಣ್ಣ ಎಸ್. (ತುಮಕೂರು) :— ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.